**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಎಸ್ ಎಲ್ ಭೋಜೇಗೌಡ,ರವರು ನಿಯಮ 330ರಡಿ ಪ್ರಸ್ತಾಪಿಸಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಕುರಿತು.**

**ವಿಷಯ**: ಅನುದಾನರಹಿತ ಉಪನ್ಯಾಸಕರಿಗೆ ನೀಡುವ ವೇತನ ಅತೀ ಕಡಿಮೆ ಇದ್ದು, ಇದರಿಂದ ಕುಟುಂಬ ನಿರ್ವಹಣೆ ಮಾಡುವುದೇ ಕಷ್ಟಕರವಾಗಿದ್ದು, ಅನಾರೋಗ್ಯದ ಸಮಯದಲ್ಲಿ ಸಕಾಲದಲ್ಲಿ ಸೂಕ್ತ ಚಿಕಿತ್ಸೆ ಪಡೆಯಲು ಸಾಧ್ಯವಾಗದ ಪರಿಸ್ಥಿತಿ ಇರುವುದರಿಂದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ನೌಕರರಿಗೆ ನೀಡುತ್ತಿರುವ ಆರೋಗ್ಯ ಸಂಜೀವಿನಿ ಸೌಲಭ್ಯ ಅಥವಾ ಆರೋಗ್ಯ ಕಾರ್ಡನ್ನು ಮಾನವೀಯ ದೃಷ್ಟಿಯಿಂದ ಅನುದಾರಹಿತ ಉಪನ್ಯಾಸಕರಿಗೂ ವಿಸ್ತರಿಸಿ ಅನುಕೂಲ ಮಾಡಿಕೊಡುವ ಕುರಿತು ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರಲ್ಲಿ ನಿಯಮ 330ರಡಿ ಚರ್ಚೆ ನಡೆಸಲು ಅವಕಾಶ ನೀಡುವಂತೆ ಕೋರುತ್ತೇನೆ.

**ಉತ್ತರ**

ಖಾಸಗಿ ಶಿಕ್ಷಣ ಸಂಸ್ಥೆಗಳಲ್ಲಿ ಶಿಕ್ಷಕರು ಅಥವಾ ಇತರೆ ಸಿಬ್ಬಂದಿಗಳ (ಆದರೆ ಸಂಸ್ಥೆಯ ಮುಖ್ಯಸ್ಥರನ್ನು ಹೊರತು ಪಡಿಸಿ) ನೇಮಕಾತಿ ಹಾಗೂ ನಿಯಂತ್ರಣ ಕುರಿತಂತೆ ಸದರಿ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯು ನೇಮಕಾತಿ ಮತ್ತು ಶಿಸ್ತು ಪ್ರಾಧಿಕಾರಿಯಾಗಿರುತ್ತದೆ.

ಖಾಸಗಿ ಶಿಕ್ಷಣ ಸಂಸ್ಥೆಗಳ ವತಿಯಿಂದ ನಡೆಯುತ್ತಿರುವ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರಿಗೆ ಆರೋಗ್ಯ ಸಂಜೀವಿನಿ ಸೌಲಭ್ಯವನ್ನು ಹಾಗೂ ವೈದ್ಯಕೀಯ ವೆಚ್ಚ ಭರಿಸಲು ಅವಕಾಶವಿರುವುದಿಲ್ಲ.

(ಎಸ್, ಮಧು ಬಂಗಾರಪ್ಪ )
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

**ಸಂಖ್ಯೆ:** ಇಪಿ 266 ಡಿಜಿಡಬ್ಲ್ಯೂ 2024